Fax: 08282-256262
E-mail:kuvempuacademic@gmail.com

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

**Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings**

ಸಂಖ್ಯೆ:ಕುವಿ:ಶೈವಿ:ಎಸಿ–6: 1024:2023–24

ದಿನಾಂಕ:15–06–2023.

## ಸುತ್ತೋಲೆ

ವಿಷಯ: ಶಿಕ್ಷಣ ಇಲಾಖೆಯ ನಮೂನೆಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಮಕ್ಕಳ ತಂದೆ ಹೆಸರು ಕಡ್ಡಾಯಗೊಳಿಸದಿರುವ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಸ್ವೀಕೃತವಾದ ಮನವಿಯನ್ನು ಅಗತ್ಯ ಕ್ರಮಕೈಗೊಳ್ಳುವ ಕುರಿತು.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 21 ವಿವಿಧ 2023ದಿನಾಂಕ:26–04–2023.

*****

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಚಿವರುಗಳ ಅಧ್ಯಕ್ಷತೆಯಲ್ಲಿ ದಿನಾಂಕ:08–12–2022ರಂದು ನಡೆದ ಸಭೆಯಲ್ಲಿ ಮಾಜಿ ದೇವದಾಸಿ ಮಹಿಳೆಯರ ಮತ್ತು ಮಕ್ಕಳ ಕುಂದು ಕೊರತೆಗಳು ಹಾಗೂ ಅವುಗಳಿಗೆ ಇರುವ ಪರಿಹಾರಗಳ ಕುರಿತಂತೆ ಶಿಕ್ಷಣ ಇಲಾಖೆ ಬಳಸುವ ವಿವಿಧ ನಮೂನೆಗಳಲ್ಲಿ ವಿದ್ಯಾರ್ಥಿಗಳ ತಂದೆಯ ಹೆಸರನ್ನು ನಮೂದಿಸುವುದು ಕಡ್ಡಾಯಗೊಳಿಸಲಾಗಿದ್ದು, ಮಾಜಿ ದೇವದಾಸಿ ಮಹಿಳೆಯರ ಮಕ್ಕಳು ಆನ್‌ಲೈನ್ ಅರ್ಜಿಗಳನ್ನು ಭರ್ತಿಮಾಡುವಾಗ ತಂದೆಯ ಹೆಸರು ಕಡ್ಡಾಯ ಮಾಡಿರುವುದರಿಂದ ಅರ್ಜಿಗಳನ್ನು ತಿರಸ್ಕೃತಗೊಳ್ಳುತ್ತಿದ್ದು, ಈ ಕುರಿತು ವಿನಾಯಿತಿ ನೀಡಲು ಕೋರಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ. ಅದರಂತೆ, ಉನ್ನತ, ತಾಂತ್ರಿಕ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಗಳಲ್ಲಿ ಬಳಸುವ ನಮೂನೆ / ಅರ್ಜಿಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಮಕ್ಕಳಿಗೆ ತಂದೆ / ಪೋಷಕರ ಹೆಸರನ್ನು ನಮೂದಿಸುವಲ್ಲಿ ತಾಯಿಯ ಹೆಸರನ್ನು ನಮೂದಿಸಲು ಅನುಮತಿ ನೀಡಲು ತೀರ್ಮಾನಿಸಲಾಗಿರುತ್ತದೆ.

ಇದನ್ನು ಅನುಷ್ಠಾನಗೊಳಿಸಬೇಕಾಗಿರುವುದರಿಂದ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ಎಲ್ಲಾ ಸಂಯೋಜಿತ, ಘಟಕ ಮತ್ತು ನೇರ ಆಡಳಿತ್ಕೊಳಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ಮತ್ತು ಎಲ್ಲಾ ವಿಭಾಗದ ಅಧ್ಯಕ್ಷರುಗಳು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಗಳಿದ್ದಲ್ಲಿ ಸಲ್ಲಿಸುವಂತೆ ತಿಳಿಸಲಾಗಿದೆ.

ಕುಲಸಚಿವರಿಂದ ಕರಡು
ಅನುಮೋದನೆಯಾಗಿದೆ.

ಉಪಕುಲಸಚಿವ

ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451
ಶಿವಮೊಗ್ಗ ಜಿಲ್ಲೆ.

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಕ್ಷರುಗಳಿಗೆ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ, / ಶಿವಮೊಗ್ಗ / ಕಡೂರು / ಚಿಕ್ಕಮಗಳೂರು.
2. ಎಲ್ಲಾ ಸಂಯೋಜಿತ / ಘಟಕ ಮತ್ತು ನೇರ ಆಡಳಿತ್ಕೊಳಪಟ್ಟ ಕಾಲೇಜಿನ ಪ್ರಾಂಶುಪಾಲರುಗಳಿಗೆ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ, / ಶಿವಮೊಗ್ಗ / ಕಡೂರು / ಚಿಕ್ಕಮಗಳೂರು.

15/6/2023

**ಪ್ರತಿ:**

1. ಕಛೇರಿ ಪ್ರತಿ